ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಎತ್ತಿನಹೊಳೆ ಯೋಜನೆಯ ಕಾಮಗಾರಿಗಳ ಬಗ್ಗೆ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

354(444) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎತ್ತಿನಹೊಳೆ ಯೋಜನೆಗಾಗಿ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಎತ್ತಿನಹೊಳೆ ಯೋಜನೆಯಡಿ ರಾಜ್ಯದಾದ್ಯಂತ ಕೈಗೆತ್ತಿಕೊಳ್ಳಲಾಗಿರುವ ಪೈಪ್‌ಲೈನ್ ಮತ್ತು ಚಾನಲ್ ನಿರ್ಮಾಣ ಕಾಮಗಾರಿಗಳು ಯಾವುವು; ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಎತ್ತಿನಹೊಳೆ ಯೋಜನೆಯಡಿ ರಾಜ್ಯದಾದ್ಯಂತ ಕೈಗೊಂಡಿರುವ ಸಮುದಾಯ ಭವನ ನಿರ್ಮಾಣ /ರಸ್ತೆ ನಿರ್ಮಾಣ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ; ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಈ) ಎತ್ತಿನಹೊಳೆ ಯೋಜನೆಯಡಿ ಪೈಪ್‌ಲೈನ್ ಮತ್ತು ಚಾನಲ್ ನಿರ್ಮಾಣದಂತಹ ಅಗತ್ಯ ಕಾಮಗಾರಿಗಳು ಬಹಳ ಕುಂಠಿತಗೊಂಡಿದ್ದು, ಸಮುದಾಯ ಭವನ ನಿರ್ಮಾಣ/ರಸ್ತೆ ನಿರ್ಮಾಣ ಕಾಮಗಾರಿಗಳಂತಹ ಇತರೆ ಕಾಮಗಾರಿಗಳೆ ಹೆಚ್ಚಾಗಿ ನಡೆಯುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು)